**1 ನೇ ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸಾಗರ**

**ಸಿ.ಸಿ ಸಂಖ್ಯೆಃ 270-2025**

**ಸಿ.ಡಬ್ಲ್ಯೂ -11, ಪಿ.ಡಬ್ಲ್ಯೂ -8**

| | | |
|---|---|---|
| ಸಾಕ್ಷಿದಾರರ ಹೆಸರು | : | ಜಗದೀಶ್ |
| ತಂದೆಯ ಹೆಸರು | : | ಕೃಷ್ಣ ನಾಯ್ಕ |
| ವಯಸ್ಸು | : | 56 ವರ್ಷ |
| ಉದ್ಯೋಗ | : | ಅಕ್ಕಸಾಲಿಗ |
| ವಾಸ | : | ಶಾಂತಿ ನಗರ, ಸಾಗರ ತಾಲ್ಲೂಕು. |

**ಪ್ರಮಾಣೀಕರಿಸಿದ ದಿನಾಂಕ :23.06.2026.**

**ಮುಖ್ಯ ವಿಚಾರಣೆ : ಸಹಾಯಕ ಸರ್ಕಾರಿ ಅಭಿಯೋಜಕರಿಂದ**

1. ಸುಮಾರು 2 ವರ್ಷಗಳ ಹಿಂದೆ ಪೊಲೀಸರು ನನ್ನನ್ನು ಠಾಣೆಗೆ ಕರೆದಿದ್ದರು. ಠಾಣೆಯಲ್ಲಿ ಕೆಲವು ಆಭರಣಗಳನ್ನು ತೋರಿಸಿ ಪೋಟೋ ತೆಗೆಸಿರುತ್ತಾರೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಅಮಾನತ್ತು ಪಂಚನಾಮೆಗೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದಿದ್ದರಿಂದ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಕೋರಿಕೊಂಡಿರುತ್ತಾರೆ. ಕಡತಗಳನ್ನು ಪರಿಶೀಲಿಸಿ ಆಲಿಸಿ ಅನುಮತಿಯನ್ನು ನೀಡಲಾಯಿತು.)

ಪಾಟೀ ಸವಾಲುಃ- ಸ.ಸ.ಅ. ರವರಿಂದಃ-

1. ಈಗ ಓದಿ ಹೇಳಿದಂತೆ ದಿಃ21.01.02024 ರಂದು ನಾನು ಪೊಲೀಸರ ಮುಂದೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಪೊಲೀಸರ ಮುಂದೆ ನೀಡಿದ ಹೇಳಿಕೆಗೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದಿದ್ದರಿಂದ ಹೇಳಿಕೆಯ ದೃಢೀಕೃತ ನಕಲನ್ನು ನಿಪಿ 28 ಎಂದು ಗುರುತಿಸಲಾಯಿತು. ಎಲ್ಲಾ ವಿಷಯ ಗೊತ್ತಿದ್ದರೂ ಆರೋಪಿಗೆ ಸಹಾಯವಾಗಲಿ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.

<u>ಮರು ವಿಚಾರಣೆಃ ಇಲ್ಲ</u>

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ರೀತ್ಯಾ ಗಣಕೀಕರಿಸಲಾಯ್ತು)**
**ಓದಿ ಹೇಳಿ ಕೇಳಿ ಸರಿ ಇದೆ**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಾಗರ.